DEMAND NO. 16 – HOUSING

Sir, on the recommendation of the Governor, I beg to move:

"That a sum not exceeding Rs. 1,23,369.70 Lakhs on Revenue Account and Rs.1,535.00 Lakhs on Capital Account (inclusive of the sum granted "on account") be granted to the Government to defray the charges which will come in course of payments during the financial year ending 31st day of March 2012 in respect of "Housing".

BANGALORE
Dated: June, 2011

Secretary
Karnataka Legislative Council

9. ಶಾಸನ ರಚನೆ

(ಅ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಪರ್ಯಾಲೋಚನಾ ಪ್ರಸ್ತಾವ

1. ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕ, 2011

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, 2009ರಲ್ಲಿ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, 2009ರಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ ಕಲಂ 95ಕ್ಕೆ ತಿದ್ದುಪಡಿ ತಂದು ಸುಮಾರು 3 ಲಕ್ಷದಿಂದ 5 ಲಕ್ಷ ಜನರಿಗೆ, ಅವರೇನು Revenue site unauthorized construction ಮಾಡಿದ್ದಾರೆ ಅವರಿಗೆಲ್ಲ ಸಕ್ರಮೀಕರಣ ಮಾಡಬೇಕೆಂದು ಈ ತಿದ್ದುಪಡಿ ತಂದಿದ್ದೇವೆ. ನಗರಾಭಿವೃದ್ಧಿ ಖಾತೆಯ ಜೊತೆಗೆ ಅವರೂ ಅಕ್ರಮ ಸಕ್ರಮ ಯೋಜನೆ ತರುತ್ತಿದ್ದಾರೆ ಎನ್ನುವಂಥ ಗೊಂದಲದಲ್ಲಿ ಆ ಸಮಯದಲ್ಲಿ ಅರ್ಜಿಗಳನ್ನು ಕರೆಯಲಿಕ್ಕಾಗುವುದಿಲ್ಲ. ಆದ್ದರಿಂದ, ಸಮಯವನ್ನು ವಿಸ್ತರಣೆ ಮಾಡಲಿಕ್ಕೆ ಈ ತಿದ್ದುಪಡಿಯನ್ನು ಇವತ್ತಿನ ಸಭೆಯಲ್ಲಿ ತಂದಿದ್ದೇವೆ.

ಅಧ್ಯಕ್ಷರು: ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದಿದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವವು ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರು ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ

ಖಂಡ 2

ಅಧ್ಯಕ್ಷರು: ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

2ನೇ ಖಂಡವು ವಿಧೇಯಕದ ಅಂಗವಾಗಿರಬೇಕೆನ್ನುವುದು ಸಭೆಯ ಮುಂದಿರುವ ವಿಷಯ

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ

2ನೇ ಖಂಡವು ವಿಧೇಯಕದ ಅಂಗವಾಯಿತು

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ

ಅಧ್ಯಕ್ಷರು: ಮೊದಲನೆಯ ಖಂಡ, ಹೆಸರು ಮತ್ತು ಅವರತಣಿಕೆ ವಿಧೇಯಕದ ಭಾಗವಾಗಿರಬೇಕೆಂದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಅಧ್ಯಕ್ಷರು: ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

ಪ್ರಸ್ತಾವದ ಅಂಗೀಕಾರ

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2011ನೇ ಸಾಲಿನ ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರ "ಹೌದು ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

2. ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕ, 2011

ಶ್ರೀ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಪರಿಶೀಲನೆಗೆ ಪರಿಗಣಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಮುಮ್ತಾಜ್ ಅಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, 1983ರಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಆಯೋಗ ನೇಮಕವಾಯಿತು. ಆಗ ಯಾವ ಕಾನೂನು ಇರಲಿಲ್ಲ. 1994ರಲ್ಲಿ ಒಂದು ಕಾನೂನನ್ನು ರಚಿಸಲಾಯಿತು. ಈ ಕಾನೂನನ್ನು ಅಳವಡಿಸಿದಾಗ ಕೆಲವು ದೋಷಗಳು ಕಂಡುಬಂದವು. ಏನೂ ವಿದ್ಯೆ ಇಲ್ಲದಿದ್ದರೂ ಕೂಡ